ದಿನಾಂಕ : DATE 16/3/21
ವಿಷಯ / DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:

# ಸೀಡಿ ಕೇಸ್: ಜಾಹೀರಾತು ಏಜೆನ್ಸಿ ಮೇಲೆ ದಾಳಿ

## ಶೇಷಾದ್ರಿಪುರಂನಲ್ಲಿರುವ ಏಜೆನ್ಸಿಯಲ್ಲಿ ಎಸ್‌ಐಟಿ ತಂಡದಿಂದ 3 ತಾಸು ಪರಿಶೀಲನೆ | ಮಾಜಿ ಸಚಿವರ ಸೀಡಿ ಇಲ್ಲೇ ಎಡಿಟ್ ಮಾಡಿರುವ ಶಂಕೆ

## ಕಿಂಗ್‌ಪಿನ್ ಪತ್ರಕರ್ತನ ಪತ್ನಿಗೆ ಬಸವನಗುಡಿ ಮಹಿಳಾ ಠಾಣೆಗೆ ಬುಲಾವ್ | ಇಂದು ಬೆಳಗ್ಗೆ 11 ಗಂಟೆಗೆ ವಿಚಾರಣೆಗೆ ಹಾಜರಾಗುವಂತೆ ಸೂಚನೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು 16/3/21

ರಾಜ್ಯ ರಾಜಕಾರಣದಲ್ಲಿ ಭಾರೀ ಸದ್ದು ಮಾಡಿರುವ ಮಾಜಿ ಸಚಿವರದ್ದು ಎನ್ನಲಾದ ಅಶ್ಲೀಲ ಸೀಡಿ ಪ್ರಕರಣದ ತನಿಖೆ ಚುರುಕುಗೊಳಿಸಿರುವ ವಿಶೇಷ ತನಿಖಾತಂಡ(ಎಸ್‌ಐಟಿ) ಸೋಮವಾರ ಬೆಂಗಳೂರಿನ ಶೇಷಾದ್ರಿಪುರಂನಲ್ಲಿರುವ ಜಾಹೀರಾತು ಸಂಸ್ಥೆಯೊಂದರ ಮೇಲೆ ದಾಳಿ ನಡೆಸಿದೆ.

ಈ ಮಧ್ಯೆ ಪ್ರಕರಣದ ಕಿಂಗ್‌ಪಿನ್ ತುಮಕೂರಿನ ಶಿರಾ ಮೂಲದ ಪತ್ರಕರ್ತನ ಪತ್ನಿಗೆ ಎಸ್‌ಐಟಿ ನೋಟಿಸ್ ಜಾರಿ ಮಾಡಿದ್ದು, ಮಂಗಳವಾರ ಬೆಳಗ್ಗೆ 11 ಗಂಟೆ ಸುಮಾರಿಗೆ ಬಸವನಗುಡಿ ಮಹಿಳಾ ಠಾಣೆಗೆ ಹಾಜರಾಗುವಂತೆ ಸೂಚಿಸಿದೆ.

ಎಸಿಪಿ ನಾಗರಾಜ್ ಅವರ ನೇತೃತ್ವದ ತಂಡ ಖಾಸಗಿ ಜಾಹೀರಾತು ಮತ್ತು ಇವೆಂಟ್ ಮ್ಯಾನೇಜ್‌ಮೆಂಟ್ ಸಂಸ್ಥೆ ಮೇಲೆ ದಾಳಿ ನಡೆಸಿ ಅಗತ್ಯ ಮಾಹಿತಿ ಕಲೆ ಹಾಕಿದೆ. ಸಂಜೆ ಐದು ಗಂಟೆಯಿಂದ ರಾತ್ರಿ ಎಂಟು ಗಂಟೆವರೆಗೆ ಸಂಸ್ಥೆಯಲ್ಲಿ ಎಸ್‌ಐಟಿ ಅಧಿಕಾರಿಗಳು ಶೋಧ ನಡೆಸಿದ್ದಾರೆ. ಪ್ರಕರಣದಲ್ಲಿರುವ ಸಿಲುಕಿರುವ ಪತ್ರಕರ್ತರ ಪೈಕಿ ಕೆಲವರು ಈ ಕಂಪನಿಗೆ ಪದೇ ಪದೇ ಬಂದು ಹೋಗುತ್ತಿದ್ದರು. ಮುಖ್ಯವಾಗಿ ಚಿಕ್ಕಮಗಳೂರು ಮೂಲದ ವ್ಯಕ್ತಿ ಹೆಚ್ಚಾಗಿ ಬರುತ್ತಿದ್ದ. ಹೀಗಾಗಿ ಈ ಕಂಪನಿಯಲ್ಲೇ ಸೀಡಿಯಲ್ಲಿರುವ ಫೋಟೋ ಮತ್ತು ವಿಡಿಯೋವನ್ನು ಎಡಿಟ್ ಮಾಡಿರುವ ಶಂಕೆ ಹಿನ್ನೆಲೆಯಲ್ಲಿ ದಾಳಿ ನಡೆಸಲಾಗಿದೆ ಎಂದು ಎಸ್‌ಐಟಿ ಮೂಲಗಳು ತಿಳಿಸಿವೆ.

**ಮೂವರ ವಿಚಾರಣೆ ಮುಂದುವರಿಕೆ:** ಪ್ರಕರಣದಲ್ಲಿ ಶಾಮೀಲಾಗಿದ್ದಾರೆ ಎನ್ನಲಾದ ಚಿಕ್ಕಮಗಳೂರು ಮೂಲದ ವ್ಯಕ್ತಿ, ಸಂತ್ರಸ್ತೆಯ ಮಾಜಿ ಪ್ರಿಯತಮ ಹಾಗೂ ಆಕೆಯ ಸ್ನೇಹಿತೆಯನ್ನು ತನಿಖಾ ತಂಡ ಸೋಮವಾರ ಕೂಡ ವಿಚಾರಣೆ ನಡೆಸಿದೆ. ಸಂತ್ರಸ್ತೆ ಕೆಲ ದಿನಗಳ ಕಾಲ ಗೋವಾದಲ್ಲಿ ಸ್ನೇಹಿತೆ ಮನೆಯಲ್ಲಿ ಆಶ್ರಯ ಪಡೆದಿದ್ದಾಳೆ. ಆಶ್ರಯ ನೀಡಿದ್ದ ಯುವತಿಯನ್ನು ವಿಚಾರಣೆ ನಡೆಸಲಾಗಿದೆ. ಈ ಬಗ್ಗೆ ಯುವತಿ, ಪ್ರಕರಣಕ್ಕೆ ಸಂಬಂಧಿಸಿದಂತೆ ನನಗೆ ಏನು ತಿಳಿದಿಲ್ಲ. ಸ್ನೇಹಿತೆ ಎಂಬ ಕಾರಣಕ್ಕೆ ಆಶ್ರಯ ನೀಡಿದ್ದಾಗಿ ಹೇಳಿದ್ದಾಳೆ ಎನ್ನಲಾಗಿದೆ. ಆಡುಗೋಡಿಯಲ್ಲಿರುವ ಸಿಸಿಬಿ ಸೈಬರ್ ಸೆಲ್‌ನಲ್ಲಿ ಮೂವರನ್ನು ಪ್ರತ್ಯೇಕವಾಗಿ ವಿಚಾರಣೆ ನಡೆಸಿ ಹೇಳಿಕೆ ದಾಖಲಿಸಿಕೊಂಡಿದೆ.

### ಯುವತಿ ವಿಡಿಯೋ ಬಗ್ಗೆ ತನಿಖೆ ಕಷ್ಟ!



ಸೀಡಿಯಲ್ಲಿರುವ ಯುವತಿ ಅಜ್ಞಾತ ಸ್ಥಳದಲ್ಲಿ ಕುಳಿತು ವಿಡಿಯೋ ಬಿಡುಗಡೆ ಮಾಡಿದ್ದಾರೆ. ಅದನ್ನು ಪರಿಗಣಿಸಿ ತನಿಖೆ ನಡೆಸುವುದು ಕಷ್ಟ ಎಂದು ನಗರ ಪೊಲೀಸ್ ಆಯುಕ್ತ ಕಮಲ್ ಪಂತ್ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯುವತಿ ತಮಗಾದ ಅನ್ಯಾಯವನ್ನು ಲಿಖಿತ ರೂಪದಲ್ಲಿ ನೀಡಿದರೆ ತನಿಖೆ ನಡೆಸುತ್ತೇವೆ. ಆಕೆ ಸ್ವಯಂಪ್ರೇರಿತವಾಗಿ ವಿಚಾರಣೆಗೆ ಹಾಜರಾಗಿ ಹೇಳಿಕೆ ದಾಖಲಿಸಬೇಕು. ಆಗ ಮಾತ್ರ ತನಿಖೆ ನಡೆಸಲು ಸಾಧ್ಯ ಎಂದು ಹೇಳಿದರು.

### ಧ್ವನಿ ಮಾದರಿ ಲ್ಯಾಬ್‌ಗೆ

ಸೀಡಿ ಪ್ರಕರಣದಲ್ಲಿ 10 ನಿಮಿಷಗಳ ವಿಡಿಯೋದಲ್ಲಿರುವ ಹಿನ್ನೆಲೆ ಧ್ವನಿ ಚಿಕ್ಕಮಗಳೂರು ಮೂಲದ ವ್ಯಕ್ತಿಯದ್ದು ಎಂಬ ಅನುಮಾನ ವ್ಯಕ್ತವಾಗಿದ್ದು, ಈತನ ಧ್ವನಿ ಮಾದರಿಯನ್ನು ಸಂಗ್ರಹಿಸಿ ವಿಧಿ ವಿಜ್ಞಾನ ಪ್ರಯೋಗಾಲಯಕ್ಕೆ (ಎಫ್‌ಎಸ್‌ಎಲ್) ಕಳುಹಿಸಲಾಗಿದೆ. ಎಫ್‌ಎಸ್‌ಎಲ್ ವರದಿಯಲ್ಲಿ ಧ್ವನಿ ಆ ವ್ಯಕ್ತಿಯದ್ದೇ ಎಂಬುದು ದೃಢಪಟ್ಟರೆ ಆತನನ್ನು ಬಂಧಿಸುವ ಸಾಧ್ಯತೆ ಇದೆ ಎಂದು ಹೇಳಲಾಗುತ್ತಿದೆ.